# ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ಸಾಂಸ್ಕೃತಿಕ ವೇದಿಕೆಯಿಂದ ಹಮ್ಮಿಕೊಂಡಿದ್ದ 'ಕನ್ನಡ ರಾಜ್ಯೋತ್ಸವ ಹಾಗೂ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮ ದಿನಾಚರಣೆ' ಕಾರ್ಯಕ್ರಮ

**Date:2-11-2016**

ಯುವ ಜನಾಂಗ ಕನ್ನಡ ನಾಡು-ನುಡಿಯ ಬಗ್ಗೆ ನಿರಭಿಮಾನಿಗಳಾಗುತ್ತಿರುವುದು ಆತಂಕಕಾರಿ ಸಂಗತಿ ಎಂದು ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ ವಾಣಿಜ್ಯಶಾಸ್ತ್ರ ಸಹ ಪ್ರಾಧ್ಯಾಪಕ ಪ್ರೊ.ಅರ್ಕಸಾಲಿ ಡಿ.ಅರಬಿಂದು ಬೇಸರ ವ್ಯಕ್ತಪಡಿಸಿದರು.

ನಗರದ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ಸಾಂಸ್ಕೃತಿಕ ವೇದಿಕೆಯಿಂದ ಹಮ್ಮಿಕೊಂಡಿದ್ದ 'ಕನ್ನಡ ರಾಜ್ಯೋತ್ಸವ ಹಾಗೂ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮ ದಿನಾಚರಣೆ' ಕಾರ್ಯಕ್ರಮದಲ್ಲಿ ಮುಖ್ಯಭಾಷಣಕಾರರಾಗಿ ಅವರು ಮಾತನಾಡಿದರು.



ತಮಿಳಿಗಿಂತಲೂ ಪ್ರಾಚೀನ ಭಾಷೆಯಾದ ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದಕ್ಕಿದೆ. ಕನ್ನಡ ಮತ್ತು ಕರ್ನಾಟಕಕ್ಕೆ ನಿಕಟ ಸಂಬಂಧವಿದೆ. ವಿವಿಧ ಪ್ರಾಂತ್ಯಗಳಲ್ಲಿ ಹರಿದು ಹಂಚಿಹೋಗಿದ್ದ ಕನ್ನಡಿಗರ ಪ್ರದೇಶ 1956ರಲ್ಲಿ ಏಕೀಕರಣಗೊಂಡು, 1973ರಲ್ಲಿ ಕರ್ನಾಟಕ ಎಂದಾಯಿತು. ಹೀಗೆ ಹೋರಾಟ, ಚಳವಳಿಗಳ ಫಲವಾಗಿ ಒಂದುಗೂಡಿದ ಈ ನಾಡಲ್ಲಿ ಕನ್ನಡ ಭಾಷೆಯ ಬಗ್ಗೆ ನಿರಾಸಕ್ತಿ ಎದ್ದು ಕಾಣುತ್ತಿರುವುದು ನೋವಿನ ಸಂಗತಿ ಎಂದರು.

ಕನ್ನಡಿಗರಲ್ಲಿ ಇಂಗ್ಲಿಷ್ ವ್ಯಾಮೋಹ ಹೆಚ್ಚುತ್ತಿದೆ. ಕನ್ನಡ ಶಾಲೆಗಳು ಮುಚ್ಚುತ್ತಿದ್ದರೆ, ಅತ್ತ ಇಂಗ್ಲಿಷ್ ಕಾನ್ವೆಂಟ್‌ಗಳು ಹೆಚ್ಚಾಗುತ್ತಿವೆ. ಜನರಲ್ಲಿ ಕನ್ನಡದಿಂದ ಉದ್ಯೋಗ ಸಿಗುವುದಿಲ್ಲ, ಇಂಗ್ಲಿಷ್ ಕಲಿತರೆ ಮಾತ್ರ ಉದ್ಯೋಗ-ವ್ಯವಹಾರ ಸಾಧ್ಯ ಎಂಬ ತಪ್ಪು ಕಲ್ಪನೆ ಮನೆಮಾಡಿದೆ. ಕೇರಳ, ತಮಿಳುನಾಡು, ಆಂಧ್ರ ಮತ್ತಿತರೆ ರಾಜ್ಯಗಳಲ್ಲಿರುವ ಭಾಷಾಪ್ರೇಮ ಕನ್ನಡಿಗರಲ್ಲೇಕಿಲ್ಲ ಎಂದು ಪ್ರಶ್ನಿಸಿದರು.



ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಉಪಪ್ರಧಾನಿಯಾಗಿದ್ದಾಗ ವಿವಿಧ ಪ್ರಾಂತ್ಯಗಳಲ್ಲಿ ಹಂಚಿಹೋಗಿದ್ದ ಆಯಾ ಭಾಷಿಗರನ್ನು ಒಟ್ಟುಗೂಡಿಸುವ ಪ್ರಯತ್ನ ನಡೆಯಿತು. ದೇಶವನ್ನು ಒಕ್ಕೂಟ ವ್ಯವಸ್ಥೆಗೆ ಅಣಿಗೊಳಿಸುವಲ್ಲಿ ವಲ್ಲಭಭಾಯಿ ಪಟೇಲರ ಸಾಧನೆ ಸ್ಮರಣೀಯ. ಉಕ್ಕಿನ ಮನುಷ್ಯ ಎಂದೇ ಖ್ಯಾತರಾದ ಪಟೇಲರ ಅಪ್ರತಿಮ ದೇಶಪ್ರೇಮ ಮತ್ತು ಆದರ್ಶಗಳು ಯುವ ಜನಾಂಗಕ್ಕೆ ಮಾದರಿಯಾಗಿವೆ ಎಂದು ಬಣ್ಣಿಸಿದರು.

ಕಾಲೇಜಿನ ಪ್ರಾಂಶುಪಾಲ ಡಾ.ಅಣ್ಣೇಗೌಡ ಅಧ್ಯಕ್ಷತೆವಹಿಸಿ ಮಾತನಾಡಿ, ಪ್ರತಿಯೊಬ್ಬರೂ ಕನ್ನಡ ನಾಡು–ನುಡಿಯ ಬಗ್ಗೆ ಅಭಿಮಾನ ಬೆಳೆಸಿಕೊಳ್ಳಬೇಕು. ಮಾತೃಭಾಷೆಯ ಮೇಲೆ ಹಿಡಿತ ಸಾಧಿಸುವುದರಿಂದ ಏನನ್ನು ಬೇಕಾದರೂ ಕಲಿಯಬಹುದು ಎಂದರು. ಹಾಗೆಯೇ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಮಾಡಿದ ದೇಶಸೇವೆ ಸ್ಮರಣೀಯ ಎಂದು ವಿವರಿಸಿದರು.

ವಿವಿಧ ಸಮಿತಿಗಳ ಪ್ರಧಾನ ಸಂಯೋಜಕ ಪ್ರೊ.ಎಂ.ಶಿವಣ್ಣ, ಅಧ್ಯಾಪಕರ ಸಂಘದ ಕಾರ್ಯದರ್ಶಿ ಪ್ರೊ.ಸೋಮಣ್ಣ, ಸಾಂಸ್ಕೃತಿಕ ಸಮಿತಿ ಕಾರ್ಯದರ್ಶಿ ಪ್ರೊ.ಪಿ.ಶಿವಣ್ಣ, ವಿದ್ಯಾರ್ಥಿ ಸಂಘದ ಅಧ್ಯಕ್ಷೆ ಕೆ.ಸೌಮ್ಯ, ತನುಜ, ಮೇಘನ ಸಿ.ಡಿ. ಹಾಜರಿದ್ದರು. ಬಳಿಕ ವಲ್ಲಭಭಾಯಿ ಪಟೇಲ್ ಅವರ ಜನ್ಮ ದಿನಾಚರಣೆ ಪ್ರಯುಕ್ತ ದೇಶದ ಏಕತೆ ಮತ್ತು ಸಮಗ್ರತೆಯನ್ನು ಸಾರುವ 'ಪ್ರತಿಜ್ಞಾವಿಧಿ'ಯನ್ನು ಎಲ್ಲ ವಿದ್ಯಾರ್ಥಿಗಳು ಮತ್ತು ಬೋಧಕ, ಬೋಧಕೇತರ ಸಿಬ್ಬಂದಿ ಸ್ವೀಕರಿಸಿದರು.